ಆ) ಇದು ಕೇಂದ್ರ ಸರ್ಕಾರದ ಯೋಜನೆಯಾಗಿದೆ ಕೇಂದ್ರೀಯ ನವೋದಯ ವಸತಿ ಶಾಲೆಗಳನ್ನು ಕೇಂದ್ರೀಯ ನವೋದಯ ವಿದ್ಯಾಲಯ ಸಮಿತಿಯ ಮೂಲಕ ಹಾಗೂ ಜಿಲ್ಲಾ ಮಟ್ಟದಲ್ಲಿ ಆಯಾ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಿರ್ವಹಿಸಲಾಗುತ್ತಿದೆ ಪ್ರತಿ ಜಿಲ್ಲೆಗೆ ಒಂದರಂತೆ ಈ ಶಾಲೆ ಮಂಜೂರು ಮಾಡಲಾಗಿದೆ ಈ ಶಾಲೆಗಳಲ್ಲಿ 6 ರಿಂದ 12ನೇ ತರಗತಿಯವರೆಗೆ ವಿದ್ಯಾಭ್ಯಾಸ ಮಾಡಲು ಅವಕಾಶ ಕಲ್ಪಿಸಲಾಗಿದ್ದು, ಒಟ್ಟು 560 ವಿದ್ಯಾರ್ಥಿಗಳನ್ನು ದಾಖಲು ಮಾಡಿಕೊಳ್ಳಲು ಅವಕಾಶವಿರುತ್ತದೆ ಪ್ರತಿ ವಸತಿ ಶಾಲೆಯ ವಾರ್ಷಿಕ ನಿರ್ವಹಣೆಗಾಗಿ ಅಂದಾಜು ರೂ 1 00 ಕೋಟಿ ಒದಗಿಸಲಾಗುತ್ತಿದೆ ಈ ವಸತಿಶಾಲೆಗಳಲ್ಲಿ 6 ಮತ್ತು 7ನೇ ತರಗತಿಯ ವಿದ್ಯಾರ್ಥಿಗಳಿಗೆ ರಾಜ್ಯ ಪಠ್ಯ ಕ್ರಮದಂತೆ ಬೋಧನೆ ನೀಡಿ 8 ರಿಂದ 12ನೇ ತರಗತಿಯವರೆಗೆ CBSE ಪಠ್ಯ ಕ್ರಮದಂತೆ ಬೋಧನೆ ನೀಡಲಾಗುತ್ತಿದೆ ಪ್ರತಿ ವಸತಿ ಶಾಲೆಗೆ 35 ಹುದ್ದೆಗಳನ್ನು 24 ಶಿಕ್ಷಕರು 11 ಬೋಧಕೇತರ ಸಿಬ್ಬಂದಿ ಹಾಗೂ 5 ಜನ ಹೊರ ಸಂಪನ್ಮೂಲದವರನ್ನು ನೇಮಿಸಲಾಗುತ್ತಿದೆ

ರಾಜ್ಯದಲ್ಲಿ ಹೊಸದಾಗಿ ನವೋದಯ ಮಾದರಿ ವಸತಿ ಶಾಲೆಗಳನ್ನು ಮಂಜೂರು ಮಾಡುತ್ತಿಲ್ಲ

ಇ) ಕೇಂದ್ರ ಸರ್ಕಾರ ತೀರ್ಮಾನಿಸಬೇಕಿದೆ

ಈ) ಕೇಂದ್ರ ಸರ್ಕಾರ ತೀರ್ಮಾನಿಸಬೇಕಿದೆ

ಉ) ಮಾಹಿತಿ ಕೇಂದ್ರ ಸರ್ಕಾರದಲ್ಲಿರುತ್ತದೆ

688 (521) ಶ್ರೀ ಮಾಮನಿ ವಿಶ್ವನಾಥ ಕರಬಸಪ್ಪ (ಪರಸಗಡ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾಂ ಜಿಲ್ಲೆ ಸವದತ್ತಿ ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಆಯುರ್ವೇದ ಆಸ್ಪತ್ರೆಗಳಲ್ಲಿ ವೈದ್ಯಾಧಿಕಾರಿಗಳ ಕೊರತೆ ಇರುವುದು ನಿಜವೇ?

ಆ) ಆಯುರ್ವೇದ ಆಸ್ಪತ್ರೆಗಳಲ್ಲಿಯ ಸಿಬ್ಬಂದಿಗಳ ಕೊರತೆಯನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮವೇನು?

ಇ) ಹಂಚಿನಾಳ ಆಯುರ್ವೇದ ಆಸ್ಪತ್ರೆಯಲ್ಲಿಯ ವೈದ್ಯಾಧಿಕಾರಿಗಳು ನಿವೃತ್ತಿ ಹೊಂದಿದ್ದು ವೈದ್ಯರ ನೇಮಕಾತಿ ಮಾಡಲಾಗುವುದೇ?

ಈ) ಹಂಚಿನಾಳಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರ ಮಂಜೂರಾತಿಗಾಗಿ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಈ ಬಗ್ಗೆ ಪ್ರಸ್ತಾವನೆಗೆ ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಕೊರತೆ ಇರುವುದಿಲ್ಲ

ಆ) ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಸಂಬಂಧಿಸಿದ ಜಿಲ್ಲಾಧಿಕಾರಿಗಳಿಗೆ ಅನುಮತಿ ನೀಡಲಾಗಿದೆ

ಇ) ಹಂಚಿನಾಳ ಇದು Aided Medical Practitioners (A M P) ಕೇಂದ್ರವಾಗಿರುತ್ತದೆ ಸರ್ಕಾರಿ ಆದೇಶ ಸಂ ಆಕುಕ/402/ಪಿಐಎಂ/83, ದಿ 2–7–1987ರ ಪ್ರಕಾರ ಸದರಿ ಕೇಂದ್ರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯರು ನಿವೃತ್ತಿ ಹೊಂದಿದ ತಕ್ಷಣ ಸದರಿ ಕೇಂದ್ರವು ರದ್ದಾಗಿರುತ್ತದೆ ಆದುದರಿಂದ ಆ ಸ್ಥಳದಲ್ಲಿ ಬೇರೆ ವೈದ್ಯರನ್ನು ನೇಮಕ ಮಾಡುವ ಪ್ರಶ್ನೆ ಉದ್ಭವಿಸುವುದಿಲ್ಲ

ಈ) ಸರ್ಕಾರವು ಈ ಬಗ್ಗೆ ಪರಿಶೀಲಿಸುತ್ತಿದೆ

609 (522) ಶ್ರೀ ಮಾಮನಿ ವಿಶ್ವನಾಥ ಕರಬಸಪ್ಪ (ಪರಸಗಡ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾಂವ ಜಿಲ್ಲೆ ಸವದತ್ತಿ ತಾಲ್ಲೂಕಿನಲ್ಲಿರುವ 100 ಹಾಸಿಗೆಯುಳ್ಳ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯಾಧಿಕಾರಿಗಳ ಮತ್ತು ಸ್ಟಾಫ್‌ನರ್ಸ್‌ಗಳ ಹುದ್ದೆಗಳಿಗೆ ನೇಮಕ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, 100 ಹಾಸಿಗೆ ಇರುವ ಸಾರ್ವಜನಿಕ ಆಸ್ಪತ್ರೆಗೆ ಅನುಗುಣವಾಗಿ ವೈದ್ಯಾಧಿಕಾರಿಗಳನ್ನು ಮತ್ತು ಸ್ಟಾಫ್‌ನರ್ಸ್‌ಗಳನ್ನು ನೇಮಕ ಮಾಡಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಆರ್ ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಬಂದಿದೆ

ಆ) ಬೆಳಗಾಂವ ಜಿಲ್ಲೆ ಸವದತ್ತಿ ತಾಲ್ಲೂಕಿನಲ್ಲಿರುವ 100 ಹಾಸಿಗೆಯುಳ್ಳ ಸಾರ್ವಜನಿಕ ಆಸ್ಪತ್ರೆಯಲ್ಲಿ ಹಾಲಿ 9 ವೈದ್ಯಾಧಿಕಾರಿಗಳ ಹುದ್ದೆ ಮಂಜೂರಾಗಿದ್ದು 7 ವೈದ್ಯಾಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ 2 ವೈದ್ಯರ ಹುದ್ದೆ ಖಾಲಿ ಇದೆ

ಅದರಂತೆ 6 ಶುಶ್ರೂಷಕ ಹುದ್ದೆ ಮಂಜೂರಾಗಿದ್ದು 6 ಶುಶ್ರೂಷಕರು ಕರ್ತವ್ಯ ನಿರ್ವಹಿಸುತ್ತಿದ್ದಾರೆ ಯಾವುದೇ ಹುದ್ದೆ ಖಾಲಿ ಇರುವುದಿಲ್ಲ